**ಪತ್ರಿಕಾ ಪ್ರಕಟಣೆ**

## ಪ್ರಧಾನ ಮಂತ್ರಿಗಳೊಂದಿಗೆ ವಿಡಿಯೋ ಸಂವಾದ

**ಬೆಂಗಳೂರು, ಆಗಸ್ಟ್ 10 (ಕರ್ನಾಟಕ ವಾರ್ತೆ):** ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು ಇಂದು ದೇಶದಲ್ಲಿ ಪ್ರವಾಹ ಪರಿಸ್ಥಿತಿಯ ಕುರಿತು ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ನಡಿಸಿದ ವಿಡಿಯೋ ಸಂವಾದದಲ್ಲಿ ಗೃಹ ಸಚಿವ ಬಸವರಾಜ ಬೊಮ್ಮಾಯಿ ಹಾಗೂ ಕಂದಾಯ ಸಚಿವ ಆರ್. ಅಶೋಕ್ ಭಾಗವಹಿಸಿ ರಾಜ್ಯದ ಪ್ರವಾಹ ಸ್ಥಿತಿಯ ಬಗ್ಗೆ ಮಾಹಿತಿ ಒದಗಿಸಿದರು.

(ಛಾಯಾಚಿತ್ರ ಲಗತ್ತಿಸಿದೆ)

ಈ ಸಂದರ್ಭದಲ್ಲಿ ಮುಖ್ಯ ಕಾರ್ಯದರ್ಶಿ ಟಿ.ಎಂ.ವಿಜಯಭಾಸ್ಕರ್, ಅಭಿವೃದ್ಧಿ ಆಯುಕ್ತೆ ವಂದಿತಾ ಶರ್ಮ, ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ ರವಿಕುಮಾರ್ ಉಪಸ್ಥಿತರಿದ್ದರು

**No Physicial Document Verification to Farm Universities**

**Bengaluru, August 10 (Karnataka Information)** In view of COVID-19 no physical verification of documents will be conducted during the current academic year for Under Graduate admissions to Farm Universities in the State of Karnataka including KVA & FSU (Veterinary University) under Agriculturist Quota (40%). Instead, online verification of the documents submitted by each candidate will be made by the Universities.

**<u>Guidelines to the candidates for submission of documents for online verification:</u>**

Depending on the Center which the students had indicated earlier in the CET application form, can now upload the following documents through online in the links provided in the Karnataka Examination Authority & Farm University websites.

1. Documents to be uploaded for online verification.
   a. CET admission Ticket (Mandatory)
   b. Agriculturist/Manual Labour in Agricultural Activities: CERTIFICATE-3. (Vamshavruksha in the cases of undivided family)
   c. Agriculture Income Certificate
   d. SALARY CERTIFICATE-4 (if salaried class)
   e. INCOME DETAILS FROM BUSINESS: CERTIFICATE-5(if associated with any business)
   f. AFFIDAVIT: (only for consolidated income of 1c, 1d and 1e as above. First party will be candidate & second party will be the respective University)

2. The candidates are required to pay the fees of Rs. 200/-each (Rs.100/- for SC/ST& Cat-I

students) through online facility provided in the links. The candidates can download payment receipt with list of documents uploaded.

**Schedule of online verification process:**

1. Uploading of documents by the candidates-From **11-08-2020** (02.00pm onwards) to **18-08-2020** (upto12.00 midnight.)
2. Online verification of documents by the Committees at different centers as constituted by the respective Universities and prepare list of eligible candidates under Agriculturist quota – From**19-08-2020 to 22-08-2020.**
3. Forwarding of list of eligible candidates by the respective Universities to the Registrar, UAS, Bangalore - **On or before 24-08-2020** says Official Press Release

ಕೆಎಎಸ್ ಪರೀಕ್ಷಾ ತರಬೇತಿ ಶಿಬಿರ ಸಮಾರೋಪ ಸಮಾರಂಭ

**ಬೆಂಗಳೂರು, ಆಗಸ್ಟ್ 10 (ಕರ್ನಾಟಕ ವಾರ್ತೆ):**

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಕೇಂದ್ರವು ಕೆಎಎಸ್ ಹಾಗೂ ಇತರೆ ಪ್ರಮುಖ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ 2 ತಿಂಗಳ ಆನ್ ಲೈನ್ ತರಬೇತಿ ಶಿಬಿರದ ಸಮಾರೋಪ ಸಮಾರಂಭ ದಿನಾಂಕ: 12.08.2020 ರ ಬುಧವಾರ ಬೆಳಗ್ಗೆ 11ಕ್ಕೆ ಬೆಂಗಳೂರಿನಿಂದಲೇ ಆನ್ ಲೈನ್ ನಲ್ಲಿ ನಾಡಿನ ಹಿರಿಯ ಐಎಎಸ್ ಅಧಿಕಾರಿ **ಪಿ. ಮಣಿವಣ್ಣನ್** ತರಬೇತಿ ಶಿಬಿರಾರ್ಥಿಗಳಿಗೆ ಶುಭಹಾರೈಸುವರು.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಕುಲಪತಿ ಪ್ರೊ.ಎಸ್.ವಿದ್ಯಾಶಂಕರ್ ಅಧ್ಯಕ್ಷತೆ ವಹಿಸಲಿದ್ದು, 190 ಪುಟದ ಮಕ್ತ ಭಂಡಾರ ಅಧ್ಯಯನ ಪುಸ್ತಕವನ್ನು ಬಿಡುಗಡೆ ಮಾಡುವರು. ಕರ್ನಾಟಕ ಸರ್ಕಾರದ ಗ್ರಾಮೀಣ ಮೂಲಭೂತ ಅಭಿವೃದ್ಧಿ ನಿಗಮದ ಮುಖ್ಯ ಆಡಳಿತಾಧಿಕಾರಿ **ಎ.ಎಂ. ಯೋಗೀಶ್** ಮತ್ತು ಬೆಂಗಳೂರು ನಗರ ಜಿಲ್ಲೆ ವಿಶೇಷ ಜಿಲ್ಲಾಧಿಕಾರಿ **ಬಸವರಾಜು** ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗಿಯಾಗುವರು. ಕುಲಸಚಿವ ಪ್ರೊ.ಲಿಂಗರಾಜಗಾಂಧಿ ಉಪಸ್ಥಿತರಿರುವರು

2011ರಲ್ಲಿ ಆರಂಭಗೊಂಡ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರ ಹಲವು ತರಬೇತಿಗಳನ್ನು ಆಯೋಜಿಸುತ್ತಾ ಬಂದಿದೆ. ಅದರಲ್ಲಿ ಯುಪಿಎಸ್ಸಿ ಹಾಗೂ ಕೆಪಿಎಸ್ಸಿ ಪರೀಕ್ಷೆಗಳ ತರಬೇತಿಯೂ ಸೇರಿದೆ. ಕೊರೊನಾ ಕಾರಣದಿಂದ ಆನ್ ಲೈನ್ ತರಬೇತಿಯನ್ನೂ ಆಯೋಜಿಸಲಾಗಿದ್ದು, 60 ದಿನಗಳ ತರಬೇತಿ ಮುಗಿದಿದೆ ಎಂದು ತಿಳಿಸಿದ್ದಾರೆ.

ದಿನಾಂಕ 10.06.2020 ರಂದು ಕೆಎಎಸ್ ಪರೀಕ್ಷಾ ತರಬೇತಿ ಶಿಬಿರ ಪ್ರಾರಂಭವಾಯಿತು. ಉದ್ಘಾಟನೆಯು ಹಿರಿಯ ಐಪಿಎಸ್ ಅಧಿಕಾರಿ ಡಿ. ರೂಪ ಅವರಿಂದ ತರಬೇತಿಗೆ ಚಾಲನೆ ನೀಡಲಾಯಿತು. ಪ್ರಸ್ತುತ ಆನ್ಲೈನ್ ನಲ್ಲಿ 60 ದಿನ ತರಬೇತಿ ನಡೆದು ದಿನಾಂಕ:12.08.2020ರಂದು ಮುಕ್ತಾಯವಾಗಲಿದೆ. ಕೆ.ಎ.ಎಸ್ ಮತ್ತು ಇತರೆ ಪ್ರಮುಖ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ರಾಜ್ಯದ ವಿವಿಧ ಜಿಲ್ಲೆಗಳಿಂದ 450 ಅಭ್ಯರ್ಥಿಗಳು ನೋಂದಣಿಯಾಗಿದ್ದಾರೆ ಎಂದು ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಕೇಂದ್ರದ ಸಂಯೋಜನಾಧಿಕಾರಿ ಜೈನಹಳ್ಳಿ ಸತ್ಯನಾರಾಯಣಗೌಡ ತಿಳಿಸಿದ್ದಾರೆ.

## ಯೋಜನೆಗಳ ತ್ವರಿತ ಅನುಷ್ಠಾನಕ್ಕೆ ಕ್ರಮವಹಿಸದ ಅಧಿಕಾರಿಗಳ ವಿರುದ್ಧ ಕ್ರಮ : ಗೋವಿಂದ ಎಂ ಕಾರಜೋಳ

ಬೆಂಗಳೂರು. ಆ.10 (ಕರ್ನಾಟಕ ವಾರ್ತೆ) ಸಮಾಜ ಕಲ್ಯಾಣ ಇಲಾಖೆಯ ಯೋಜನೆಗಳ ತ್ವರಿತ ಅನುಷ್ಟಾನಕ್ಕೆ ಕ್ರಮವಹಿಸದ ಅಧಿಕಾರಿಗಳ ವಿರುದ್ಧ ಕ್ರಮಕೈಗೊಳ್ಳಲಾಗುವುದು ಎಂದು ಉಪಮುಖ್ಯಮಂತ್ರಿಗಳಾದ ಗೋವಿಂದ ಎಂ ಕಾರಜೋಳ ಅವರು ಎಚ್ಚರಿಕೆ ನೀಡಿದರು.

ವಿಡಿಯೋ ಸಂವಾದದ ಮೂಲಕ ಬೆಳಗಾವಿ ವಿಭಾಗದ ಸಮಾಜ ಕಲ್ಯಾಣ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯ ನಿಗಮಗಳ ಪ್ರಗತಿ ಪರಿಶೀಲನೆ ನಡೆಸಿದ ಅವರು, ಇಲಾಖೆಯ ಎಲ್ಲಾ ಕಚೇರಿಗಳು ಕಾರ್ಪೋರೇಟ್ ಕಚೇರಿಗಳಂತೆ ಸಮರೋಪಾದಿಯಲ್ಲಿ ಕಾರ್ಯನಿರ್ವಹಿಸುವ ಮೂಲಕ ಇಲಾಖೆಯ ಪ್ರತಿಷ್ಠಿತ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕು. ಸಮುದಾಯದ ಬಡವರಿಗೆ, ಅರ್ಹ ಫಲಾನುಭವಿಗಳಿಗೆ ಸೌಲಭ್ಯಗಳು ದೊರಕುವಂತೆ ಕ್ರಮೈಗೊಳ್ಳಬೇಕು. ಇಲಾಖೆಯ ಆಶಯ ಸಾಕರಾಗೊಂಡತಾಗುತ್ತದೆ. ಯೋಜನೆಗಳ ತ್ವರಿತ ಅನುಷ್ಠಾನಕ್ಕಾಗಿ ಜಿಲ್ಲಾ ಮಟ್ಟದ ಅಧಿಕಾರಿಗಳು ಕಡ್ಡಾಯವಾಗಿ ಕ್ಷೇತ್ರಪ್ರವಾಸ ಕೈಗೊಂಡು, ಪ್ರಗತಿ ಪರಿಶೀಲನೆ ನಡೆಸಬೇಕು. ಮುಂಗಡ ಪ್ರವಾಸ ವಿವರವನ್ನು ಇಲಾಖೆಯ ಮುಖ್ಯಸ್ಥರಿಗೆ ಕಳುಹಿಸಿ, ನಂತರ ಅನುಸರಣ ವರದಿಯೊಂದಿಗೆ ದಿನಚರಿಯನ್ನು ಕಳುಹಿಸಬೇಕು ಎಂದು ಅವರು ಸೂಚಿಸಿದರು.

ಪ್ರತಿಯೊಂದು ಗ್ರಾಮಕ್ಕೂ ರುದ್ರಭೂಮಿಯನ್ನು ಒದಗಿಸಬೇಕು. ರುದ್ರಭೂಮಿಗಳಿಲ್ಲಿದ ಗ್ರಾಮಗಳ ಪ್ರಸ್ತಾವನೆಯನ್ನು ಕೂಡಲೇ ಜಿಲ್ಲಾಧಿಕಾರಿಗಳ ಮೂಲಕ ಕಳುಹಿಸಬೇಕು. ರುದ್ರಭೂಮಿಗಳು ಗ್ರಾಮಗಳಿಂದ ಬಹಳ ದೂರ ಇರುವ ಬಗ್ಗೆ ದೂರುಗಳು ಬಂದಿವೆ. ಗ್ರಾಮಗಳಿಗೆ ಸಮೀಪದಲ್ಲಿದ್ದರೆ ಅನುಕೂಲವಾಗುತ್ತದೆ. ಇದನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಎಚ್ಚರಿಕೆ ನೀಡಿದರು.

ಪರಿಶಿಷ್ಟ ಫಲಾನುಭವಿಗಳಿಗೆ ಬ್ಯಾಂಕುಗಳ ಸಾಲನೀಡದಿರುವುದರ ಬಗ್ಗೆ ದೂರುಗಳು ಬಂದಿವೆ. ಸುಲಲಿತವಾಗಿ ಸಾಲ ಸೌಲಭ್ಯಗಳನ್ನು ಕಲ್ಪಿಸುವ ಉದ್ದೇಶದಿಂದ ಇಲಾಖೆಯ ನಿಗಮಗಳ ಮೂಲಕ ಶೇ. 50 ರಷ್ಟು

ನೇರಸಾಲಸೌಲಭ್ಯ ನೀಡುವ ಕಾರ್ಯಕ್ರಮಗಳನ್ನು ಜಾರಿಗೊಳಿಸಲಾಗುತ್ತಿದೆ. ಐರಾವತ ಯೋಜನೆಯಡಿ ಉದ್ಯೋಗ ದೊರಕುವಂತಹ, ಜೀವನೋಪಾಯಕ್ಕೆ ಅನುಕೂಲವಾಗುವಂತಹ ಗೂಡ್ಸ್ ವಾಹನ, ಪ್ರಯಾಣಿಕರನ್ನು ಸಾಗಿಸಲು ಅನುಕೂಲವಾಗುವಂತಹ ವಾಹನಗಳ ಪ್ರಸ್ತಾವನೆಗಳಿಗೆ ಮಂಜೂರಾತಿ ನೀಡಬೇಕು. ಶುಲ್ಕ ಮರುಪಾವತಿ ದೊರಕದಿರುವ ಬಗ್ಗೆಯೂ ದೂರುಗಳು ಬಂದಿವೆ. ಎಷ್ಟು ಪ್ರಮಾಣದ ಶುಲ್ಕವನ್ನು ಶಿಕ್ಷಣ ಸಂಸ್ಥೆಗಳಿಗೆ ನೀಡಬೇಕು? ಎಷ್ಟು ಪ್ರಮಾಣದ ಶುಲ್ಕವನ್ನು ವಿದ್ಯಾರ್ಥಿಗಳಿಗೆ ಹಿಂದಿರುಗಿಸಬೇಕು ಎನ್ನುವ ವಿವರವನ್ನು ಸಂಗ್ರಹಿಸಿ, ಕೂಡಲೇ ಶುಲ್ಕ ಮರುಪಾವತಿ ಮಾಡಬೇಕು. ಕಾಲೋನಿ ಅಭಿವೃದ್ಧಿ ಯೋಜನೆಯಡಿ ಕೆಲವೆಡೆ ಪ್ರಗತಿ ಕುಂಠಿತವಾಗಿದೆ. ಸಮರ್ಪಕವಾಗಿ ಅನುಷ್ಠಾನ ಮಾಡದ ಸಂಸ್ಥೆಯಿಂದ ಅನುದಾನ ಹಿಂಪಡೆದು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಅಥವಾ ಲೋಕೋಪಯೋಗಿ ಇಲಾಖೆಗೆ ವಹಿಸಬೇಕು. ಪ್ರತಿ ಕಾಲೋನಿಗೆ ಶುದ್ಧ ಕುಡಿಯುವ ನೀರು ಪೂರೈಕೆಗೆ ಕ್ರಮಕೈಗೊಳ್ಳಬೇಕು. ವಸತಿ ನಿಲಯಗಳ ದುರಸ್ಥಿ, ಶಾಲಾ ಕೊಠಡಿಗಳ ದುರಸ್ಥಿ ಸೇರಿದಂತೆ ನಿರ್ವಹಣೆಗಾಗಿ ಜಿಲ್ಲಾಧಿಕಾರಿಗಳ ಪಿಡಿ ಖಾತೆಯಲ್ಲಿ 500 ಕೋಟಿ ಅನುದಾನವಿದೆ. ಆದರೆ ಖರ್ಚಾಗಿಲ್ಲ. 2600 ಕ್ಕೂ ಹೆಚ್ಚು ಸಮುದಾಯ ಭವನಗಳು ಪೂರ್ಣಗೊಂಡಿವೆ. ಕೆಲವು ಪ್ರಗತಿ ಹಂತದಲ್ಲಿವೆ. ನಿವೇಶನ ಇಲ್ಲದೇ ಮಂಜೂರಾತಿ ನೀಡಿದ ಪ್ರಸ್ತಾವನೆಗಳನ್ನು ರದ್ದುಪಡಿಸಿ, ಕಾಮಗಾರಿಗಳ ತ್ವರಿತ ಅನುಷ್ಠಾನಕ್ಕೆ ಕ್ರಮಕೈಗೊಳ್ಳಬೇಕು. ಸಮಾಜ ಕಲ್ಯಾಣ ಇಲಾಖೆಯ ಯೋಜನೆಗಳನ್ನು ಸದ್ಬಳಕೆ ಮಾಡಿಕೊಂಡು, ಜೀವನೋಪಾಯ ನಡೆಸುತ್ತಿರುವವರ ವಿವರವನ್ನು ಸಂಗ್ರಹಿಸಬೇಕು. ಯೋಜನೆಗಳು ಸದ್ಬಳಕೆಯಾಗುವಂತೆ ಅಧಿಕಾರಿಗಳು ಕ್ರಮಕೈಗೊಳ್ಳಬೇಕು. ಫಲಾನುಭವಿಗಳು ಯೋಜನೆಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಡಿಸಿಎಂ ಸೂಚಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಶ್ರೀ ಜಿ. ಕುಮಾರ ನಾಯಕ್, ಎಸ್‌ಸಿಪಿ ಮತ್ತು ಟಿಎಸ್‌ಪಿ ಯೋಜನೆಯ ಸಲಹೆಗಾರರಾದ ಶ್ರೀ ಇ. ವೆಂಕಟಯ್ಯ, ಸಮಾಜ ಕಲ್ಯಾಣ ಇಲಾಖೆಯ ಆಯುಕ್ತರಾದ ಶ್ರೀ ರವಿಕುಮಾರ್

ಸುರಪುರ್, ಅಪರ ನಿರ್ದೇಶಕ ಶ್ರೀ ನಾಗೇಶ್, ಲಿಡ್ಕರ್ ವ್ಯವಸ್ಥಾಪಕ ನಿರ್ದೇಶಕ ಶ್ರೀ ನಟರಾಜ್, ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಮುಖ್ಯ ಪ್ರಧಾನವ್ಯವಸ್ಥಾಪಕ ಶ್ರೀ ಟಿ. ಕುಮಾರ್, ಬೆಳಗಾವಿ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿ**ದ್ದರು**

## ಪ್ರವಾಹ: ನಾಲ್ಕು ಸಾವಿರ ಕೋಟಿ ರೂ.ಗಳ ವಿಶೇಷ ಆರ್ಥಿಕ ನೆರವು ಒದಗಿಸಲು

ಬೆಂಗಳೂರು. ಆ.10 (ಕರ್ನಾಟಕ ವಾರ್ತೆ)

ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು ಇಂದು ಪ್ರವಾಹ ಪರಿಸ್ಥಿತಿಯ ಕುರಿತು ವಿವಿಧ ರಾಜ್ಯಗಳ ಮುಖ್ಯಮ
ನಡೆಸಿದರು.

ಗೃಹ ಸಚಿವ ಬಸವರಾಜ ಬೊಮ್ಮಾಯಿ ಅವರು ರಾಜ್ಯದ ಪ್ರವಾಹ ಪರಿಸ್ಥಿತಿಯ
ಕುರಿತು ಮಾಹಿತಿ ಒದಗಿಸಿದರು.

ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಿ ಪರಿಹಾರ ಕ್ರಮಗಳನ್ನು ಕೈಗೊಳ್ಳುವುದು ಎಂದು ಪ್ರಧಾನಿ ಮಂತ್ರಿಗಳ

ಪ್ರವಾಹದಲ್ಲಿ ಮೃತಪಟ್ಟವರಿಗೆ ತೀವ್ರಸಂತಾಪ ವ್ಯಕ್ತಪಡಿಸಿ, ಜನಜಾನುವಾರುಗಳ ರಕ್ಷಣೆ ನಮ್ಮ ಆದ್ಯತೆ ಎಂದು

*ಸಭೆ ಮುಖ್ಯಾಂಶಗಳು*

1. ಕರ್ನಾಟಕ ರಾಜ್ಯದಲ್ಲಿ ಪ್ರವಾಹ ಪರಿಸ್ಥಿತಿಯನ್ನು ನಿರ್ವಹಿಸಲು ನಾಲ್ಕು ಸಾವಿರ ಕೋಟಿ ರೂ.ಗಳ ವಿಶೇಷ ಆ
ಕೋರಲಾಯಿತು.

2. ತಕ್ಷಣದ ಪರಿಹಾರ ಮತ್ತು ಪುನರ್ವಸತಿ ಕಾರ್ಯಗಳಿಗೆ ಎಸ್.ಡಿ ಆರ್.ಎಫ್ ನ ಕಂತು . 395 ಕೋಟಿ ರೂ.ಗಳನ
ಕೋರಲಾಯಿತು.

3. ಕರ್ನಾಟಕ ರಾಜ್ಯದಲ್ಲಿ ಪ್ರವಾಹ ಪರಿಸ್ಥಿತಿ ಯನ್ನು ನಿರ್ವಹಿಸಲು ಈಗಾಗಲೇ ತರಬೇತಿ ಪಡೆದ 200 ಎಸ್.ಡಿ.ಆ
ಎನ್.ಡಿ.ಆರ್.ಎಫ್ ತಂಡಗಳು ಹಾಗೂ ನಾಲ್ಕು ರಕ್ಷಣಾ ಹೆಲಿಕಾಪ್ಟರ್ ಗಳನ್ನು ಒದಗಿಸಲಾಗಿದ್ದು, ಹೆಚ್ಚುವರಿಯ
ಕಳುಹಿಸಲು ಕೋರಲಾಯಿತು.

4. ದೀರ್ಘಾವಧಿ ಪರಿಹಾರವಾಗಿ ಕಾವೇರಿ ಹಾಗೂ ಕೃಷ್ಣಾ ನದಿ ಪಾತ್ರಗಳಲ್ಲಿ ಹಾಗೂ ಪಶ್ಚಿಮ ಘಟ್ಟಗಳು ವ್ಯಾಪ್ತಿ
ಸಂಬಂಧಿಸಿದಂತೆ ಮ್ಯಾಪಿಂಗ್ ಹಾಗೂ ಮುನ್ಸೂಚನಾ ವ್ಯವಸ್ಥೆಯನ್ನು ಸ್ಥಾಪಿಸುವ ಕುರಿತು ಕೇಂದ್ರ ಭೂ ವಿಜ್ಞಾ
ವತಿಯಿಂದ ಅಧ್ಯಯನ ಕೈಗೊಳ್ಳುವಂತೆ ಮನವಿ ಮಾಡಲಾಯಿತು.

5. ಕೇಂದ್ರ ಜಲ ಆಯೋಗದ ವತಿಯಿಂದ ಕೃಷಾ ನದಿ ಪಾತ್ರದಲ್ಲಿ ಸಮಗ್ರ ಪ್ರವಾಹ ಪರಿಸ್ಥಿತಿ ಮುನ್ಸೂಚನೆ ವ್ಯವಸ

6. ಕಡಲು ಕೊರೆತ ನಿಯಂತ್ರಣಕ್ಕೆ National Cyclone Mitigation Relief Project ಯೋಜನೆಯಡಿ ಕಡಲು ಕೊರ
ಅದಕ್ಕೆ ಅಗತ್ಯವಿರುವ ಅನುದಾನ ಬಿಡುಗಡೆ ಮಾಡಲು ಮನವಿ ಮಾಡಲಾಯಿತು.

7. ಪ್ರಸ್ತುತ ರಾಜ್ಯದಲ್ಲಿ ಉತ್ತರ ಕರ್ನಾಟಕ ಭಾಗದ ಜಿಲ್ಲೆಗಳಾದ ಬೆಳಗಾವಿ, ರಾಯಚೂರು ಸೇರಿದಂತೆ ಕೊಡಗು,
ಜಿಲ್ಲೆಗಳಲ್ಲಿ ಸತತ ಮಳೆಯಿಂದಾಗಿ 56 ತಾಲ್ಲೂಕುಗಳ 885 ಗ್ರಾಮಗಳು ಹಾನಿಗೊಳಗಾಗಿದೆ. ಪ್ರಾಥಮಿಕ ವರದಿಯ
ಎಂಭತ್ತು ಸಾವಿರ ಹೆಕ್ಟೇರ್ ಪ್ರದೇಶದ ಕೃಷಿ, ತೋಟಗಾರಿಕೆ ಬೆಳೆಗಳು, 3500 ಕಿ.ಮಿ ರಸ್ತೆ, 104 ಸಣ್ಣ ನೀರಾವರಿ
ಕಟ್ಟಡಗಳಿಗೆ ಹಾಗೂ ಇನ್ನಿತರೆ ಮೂಲಭೂತ ಸೌಕರ್ಯಗಳಿಗೆ ಹಾನಿ ಉಂಟಾಗಿದೆ.

ಕಂದಾಯ ಸಚಿವ ಆರ್.ಅಶೋಕ್, ನಗರಾಭಿವೃದ್ಧಿ ಸಚಿವ ಬೈರತಿ ಬಸವರಾಜ, ಮುಖ್ಯ ಕಾರ್ಯದರ್ಶಿ ಟಿ.ಎಂ.
ವಂದಿತಾ ಶರ್ಮ, ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ ರವಿಕುಮಾರ್ ಉಪಸ್ಥಿತರಿದ್ದರು.

## ವಸತಿ ಸಚಿವರ ಪ್ರವಾಸ

ಬೆಂಗಳೂರು. ಆ.10 (ಕರ್ನಾಟಕ ವಾರ್ತೆ): ವಸತಿ ಸಚಿವ ಹಾಗೂ ಕೊಡಗು ಜಿಲ್ಲಾ ಉಸ್ತುವಾರಿ ಸಚಿವ ವಿ. ಸೋಮಣ್ಣ ಅವರು ಆಗಸ್ಟ್ 11ರ ಮಂಗಳವಾರ ಕೊಡಗು ಜಿಲ್ಲೆಯ ತಲಕಾವೇರಿಗೆ ಪ್ರವಾಸ ಕೈಗೊಂಡು ತುರ್ತು ಕಾರ್ಯಾಚರಣೆ ಪರಿವೀಕ್ಷಣೆ ನಡೆಸಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.